# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 1090 |
| ಸದಸ್ಯರ ಹೆಸರು | | ಶ್ರೀ ಶರಣಪ್ಪ ಮಟ್ಟೂರ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | | 20-12-2018 |
| ಉತ್ತರಿಸಬೇಕಾದ ಸಚಿವರು | | ಉನ್ನತ ಶಿಕ್ಷಣ ಸಚಿವರು |
| | ಪ್ರಶ್ನೆ | ಉತ್ತರ |
| ಅ) | ಪದವಿ ಕಾಲೇಜಿನಲ್ಲಿ 10 ವರ್ಷ ಮೇಲ್ಪಟ್ಟು ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರುಗಳಿಗೆ ಸೇವಾ ಭದ್ರತೆ ಒದಗಿಸಲು ಸರ್ಕಾರ ಚಿಂತನೆ ನಡೆಸಿದೆಯೇ; ನಡೆಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಕಾರ್ಯರೂಪಕ್ಕೆ ತರಲಾಗುವುದು; | ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸುವ ಯಾವುದೆ ಪ್ರಸ್ತಾವನೆಯು ಸರ್ಕಾರದ ಮುಂದೆ ಇರುವುದಿಲ್ಲ. |
| ಆ) | ಇಲ್ಲದಿದ್ದಲ್ಲಿ, ಪದವಿ ಕಾಲೇಜಿನ ಅತಿಥಿ ಉಪನ್ಯಾಸಕರಿಗೆ ಸೇವಾ ಭದ್ರತೆ ಒದಗಿಸುವಲ್ಲಿ ಸರ್ಕಾರದ ಮುಂದಿನ ಸ್ಪಷ್ಟ ನಿಲುವೇನು; | ಅತಿಥಿ ಉಪನ್ಯಾಸಕರುಗಳು ಇಲಾಖೆಯಲ್ಲಿ ಯಾವುದೇ ಮಂಜೂರಾದ ಖಾಲಿ ಹುದ್ದೆಗಳ ಎದುರಾಗಿ ಕರ್ತವ್ಯ ನಿರ್ವಹಿಸುತ್ತಿರುವುದಿಲ್ಲ. ಪ್ರತಿ ಶೈಕ್ಷಣಿಕ ವರ್ಷದಲ್ಲಿ ವಿದ್ಯಾರ್ಥಿಗಳ ಸಂಖ್ಯೆಗನುಣವಾಗಿ ಉಂಟಾಗುವ ಕಾರ್ಯಭಾರವನ್ನು ಮೊದಲು ಖಾಯಂ ಅಧ್ಯಾಪಕರಿಗೆ ಹಂಚಿಕೆ ಮಾಡಿ, ನಂತರ ಉಳಿಕೆಯಾಗುವ ಹೆಚ್ಚುವರಿ ಕಾರ್ಯಭಾರವನ್ನು ನಿರ್ವಹಿಸಲು ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರುಗಳ ಸೇವೆಯನ್ನು ಬಳಸಿಕೊಳ್ಳಲಾಗುತ್ತದೆ. ಮುಂದುವರೆದು, ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿನ ಸಹಾಯಕ ಪ್ರಾಧ್ಯಾಪಕರ ಹುದ್ದೆಗಳನ್ನು ಈ ಸಂಬಂಧ ಯು.ಜಿ.ಸಿ. ನಿಯಮಾವಳಿಗಳಲ್ಲಿ ತಿಳಿಸಿರುವ ಮಾನದಂಡಗಳನ್ನಾಧರಿಸಿ, ನೇರ ನೇಮಕಾತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ. ಆದುದರಿಂದ, ತಾತ್ಕಾಲಿಗವಾಗಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉಪ್ಯನ್ಯಾಸಕರಿಗೆ ಸೇವಾ ಭದ್ರತೆಯನ್ನು ಒದಗಿಸಲು ಅಥವಾ ಖಾಯಂಗೊಳಿಸಲು ಅವಕಾಶವಿರುವುದಿಲ್ಲ. |
| ಇ) | ಯು.ಜಿ.ಸಿ. ನಿಯಮದ ಪ್ರಕಾರ ಅತಿಥಿ ಉಪನ್ಯಾಸಕರ ಗೌರವಧನ ಹೆಚ್ಚಿಸಲು ಸರ್ಕಾರ ಚಿಂತನೆ ನಡೆಸಿದೆಯೇ; ನಡೆಸಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹೆಚ್ಚಳ ಮಾಡಲಾಗುವುದು? | ಅತಿಥಿ ಉಪನ್ಯಾಸಕರಿಗೆ ನೀಡುತ್ತಿರುವ ಗೌರವಧನವನ್ನು ಹೆಚ್ಚಿಸುವ ಸಂಬಂಧ ಅನುದಾನದ ಲಭ್ಯತೆಯ ಬಗ್ಗೆ ಆರ್ಥಿಕ ಇಲಾಖೆಯೊಂದಿಗೆ ಸಮಾಲೋಚಿಸಿ, ಕ್ರಮ ಕೈಗೊಳ್ಳಲಾಗುವುದು. |

(ಜಿ.ಟಿ. ದೇವೇಗೌಡ)
ಉನ್ನತ ಶಿಕ್ಷಣ ಸಚಿವರು

ಇಡಿ 332 ಡಿಸಿಇ 2018